ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಕೆ.ಎಸ್.ಎಫ್.ಸಿ. ವತಿಯಿಂದ ಉದ್ದಿಮೆದಾರರ ಬಡ್ಡಿ ರಿಯಾಯಿತಿ ಯೋಜನೆ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

1292 (1444) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2018-19ನೇ ಸಾಲಿನಲ್ಲಿ ಕೆ.ಎಸ್.ಎಫ್.ಸಿ. ವತಿಯಿಂದ ಕರ್ನಾಟಕ ಸರ್ಕಾರದ ಪರಿಶಿಷ್ಟ ಜಾತಿ/ಪಂಗಡಗಳ ಉದ್ದಿಮೆದಾರರ ಬಡ್ಡಿ ರಿಯಾಯಿತಿ ಯೋಜನೆ ಹಾಗೂ ಸಾಮಾನ್ಯ ಸಾಲ ಯೋಜನೆಯಡಿ ಎಷ್ಟು ಅರ್ಹ ಉದ್ದಿಮೆದಾರರಿಗೆ ಸಾಲ ಮಂಜೂರಾತಿ ಮಾಡಲಾಗಿದೆ; (ವಿವರ ನೀಡುವುದು)

(ಆ) ಸದರಿ ಯೋಜನೆಯಡಿ ಅರ್ಜಿದಾರರಿಂದ ಪ್ರಕ್ರಿಯೆ ಶುಲ್ಕ ಪಾವತಿಸಿಕೊಂಡು, ಸಾಲ ಮಂಜೂರಾತಿ ಪತ್ರವನ್ನು ನೀಡಿ, ಕೆ.ಐ.ಎ.ಡಿ.ಬಿ. ಕೈಗಾರಿಕಾ ನಿವೇಶನ ಗುತ್ತಿಗೆ ಪಡೆಯಲು ಮೊದಲನೆ ಕಂತು ಮಂಜೂರಾದ ಮತ್ತು ಮಂಜೂರು ಆಗಬೇಕಾಗಿರುವವರ ವಿವರ ನೀಡುವುದು;

(ಇ) ಮೊದಲನೇ ಕಂತು ಬಿಡುಗಡೆ ಮಾಡುವುದರಲ್ಲಿ ತಾರತಮ್ಯ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?